# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ. ಗಂಗಾಧರ ಶೆಟ್ಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮಪಂಚಾಯತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ - ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/BD/1444/2015/ARLO-2, ದಿನಾಂಕ: 02.03.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 13.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಶ್ರೀ. ಹೆಚ್.ಎಸ್. ಶಂಕರಲಿಂಗಯ್ಯ, ನಿವೃತ್ತ ಪ್ರಾಂಶುಪಾಲರು, ಗೋವಿನಪುರದ ನಿವಾಸಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ಇವರು ತಮ್ಮ ದೂರಿನಲ್ಲಿ (1) ಶ್ರೀ. ಗಂಗಾಧರ ಶೆಟ್ಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಾಗೂ (2) ಶ್ರೀ. ನಾಗರಾಜು ಶೆಟ್ಟಿ, ಸಹಾಯಕ, ರಂಗಾಪುರ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. ದೂರಿನ ಸಂಕ್ಷಿಪ್ತ ವಿವರಣೆ :-

ದೂರುದಾರರು ತಮ್ಮ ದೂರಿನಲ್ಲಿ ತಿಪಟೂರು ತಾಲ್ಲೂಕು ಹೊಸಹಳ್ಳಿ ಗ್ರಾಮದ ಖಾನೆಷುಮಾರಿ ನಂ. 86/88 ಸ್ವತ್ತನ್ನು ದೂರುದಾರರ ಹೆಸರಿಗೆ ಪೌತಿ ವಾರಸು ಖಾತೆ ಮಾಡದೆ ಮುಂದೂಡುತ್ತಾ ಭ್ರಷ್ಟಾಚಾರದಲ್ಲೊಳಗೊಂಡು ಖಾತೆ ಮಾಡಿರುವುದಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ತಮಗೆ ನ್ಯಾಯದೊರಕಿಸಿಕೊಡಬೇಕೆಂದು ದೂರು ಸಲ್ಲಿಸಿದ್ದಾರೆ.

3. 1 ಮತ್ತು 2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಖಾನೆಷುಮಾರಿ ನಂ. 86/88 ರ ಸ್ಥಳ ಮತ್ತು ದಾಖಲಾತಿಗಳನ್ನು ಪರಿಶೀಲಿಸಲಾಗಿ, ದೂರುದಾರರು ನೀಡಿರುವ ದಾಖಲೆಯು ಸರಿಹೊಂದದ ಕಾರಣ ಅವರಿಗೆ ದಿ. 25.06.2013 ರಂದು ಹಿಂಬರಹ ನೀಡಲಾಗಿರುತ್ತದೆ. ದೂರುದಾರರು ಯಾವುದೇ ನಿಖರವಾದ ದಾಖಲಾತಿಯನ್ನು ನೀಡಿರುವುದಿಲ್ಲ. ದಿ. 08.07.2013 ರಂದು ಪುನಃ ತಾಲ್ಲೂಕು ಪಂಚಾಯಿತಿಗೆ ದೂರುದಾರರು ಖಾತೆ ಮಾಡಲು ಅರ್ಜಿ ಸಲ್ಲಿಸಿದ್ದು, ಆ ವೇಳೆಯಲ್ಲಿ ಎನ್. ನಾಗರಾಜು ತಂದೆ ನಂಜುಂಡಶೆಟ್ಟಿ ಇವರು ತಕರಾರು ಸಲ್ಲಿಸಿರುತ್ತಾರೆ. ತಾಲ್ಲೂಕು ಪಂಚಾಯಿತಿಯಿಂದ ಪುನಃ ಗ್ರಾಮಪಂಚಾಯಿತಿಗೆ ಅರ್ಜಿ ರವಾನೆಯಾಗಿದ್ದು, ಅಲ್ಲಿ ಪರಿಶೀಲಿಸಿದಾಗ ದೂರುದಾರರು ನೀಡಿರುವ ಸ್ವತ್ತಿನ ಸಂಖ್ಯೆಯಲ್ಲಿ ಸಾರ್ವಜನಿಕರು ಕುಡಿಯುವ ನೀರಿನ ಟ್ಯಾಂಕ್ ಇದ್ದು, ಆದರ ಅಳತೆಯು ತಾಳೆಯಾಗುವುದಿಲ್ಲ. ಆಗ ದಿ. 08.11.2013 ರಂದು ನಿವೇಶನಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಹಾಜರುಪಡಿಸುವಂತೆ ಹಿಂಬರಹ ನೀಡಲಾಗಿರುತ್ತದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ಖಾನೆಷುಮಾರಿ ನಂ. 86/88 ಇದರ ಬಗ್ಗೆ ಆರ್.ಎ. 85/50-51 ಸಿವಿಲ್ ನ್ಯಾಯಾಲಯದಲ್ಲಿ ದಾಖಲೆಯಾಗಿ ಅದರಲ್ಲಿ ಮೇಲ್ಮನವಿದಾರರಾದ ನಾಗಪ್ಪ ಅವರ ಮೇಲ್ಮನವಿಯು ವಜಾಗೊಂಡಿರುತ್ತದೆ. ಈ ಮೇಲ್ಮನವಿಯಲ್ಲಿ ದೂರುದಾರರ ತಾತ ಲಿಂಗಯ್ಯನವರು ಎದುರುದಾರರಾಗಿರುತ್ತಾರೆ.

6. ದೂರುದಾರರು ಹಾಜರುಪಡಿಸಿದ ಸ್ವತ್ತಿನ ಮೇಲೆ ಋಣಭಾರ ರಾಹಿತ್ಯ ಪ್ರಮಾಣಪತ್ರ 1947 ರಿಂದ 2006 ರವರೆಗೆ ಉಪನೋಂದಣಾಧಿಕಾರಿಗಳು ನೀಡಿರುತ್ತಾರೆ. ದೂರುದಾರರು ಸಲ್ಲಿಸಿರುವ ಋಣಭಾರ ರಾಹಿತ್ಯ ಪ್ರಮಾಣಪತ್ರ, ನ್ಯಾಯಾಲಯದ ತೀರ್ಪು 1947 ನೇ ಸಾಲಿನ ಕಂದಾಯಗಳ ಪಟ್ಟಿ, ಇವುಗಳು ದೂರುದಾರರ ಹೆಸರಿನಲ್ಲಿ ಖಾತೆ ಬದಲಾವಣೆ ಮಾಡಲು ಅವಶ್ಯಕ ದಾಖಲೆಗಳೆಂದು ಕಂಡುಬರುತ್ತವೆ. ಆದರೆ ಎದುರುದಾರರು ಈ ದಾಖಲೆಗಳಲ್ಲದೆ ಇನ್ನೂ ಅವಶ್ಯಕ ದಾಖಲೆಗಳನ್ನು ಹಾಜರುಪಡಿಸಿಲ್ಲವೆಂದು ಆಕ್ಷೇಪಣೆಯಲ್ಲಿ ತಿಳಿಸಿರುತ್ತಾರೆ. ಆದರೆ ಎದುರುದಾರರ ಪ್ರಕಾರ ಸಂಬಂದಪಟ್ಟ ದಾಖಲೆಗಳು ಯಾವುವು ಎಂದು ಹೇಳಿರುವುದಿಲ್ಲ. ಎದುರುದಾರರು ಉದ್ದೇಶಪೂರ್ವಕವಾಗಿ ದೂರುದಾರರಿಗೆ ಸಂದಿಗ್ಧ ಹಿಂಬರಹ ನೀಡಿದ್ದಾರೆಂದು ಕಂಡುಬರುತ್ತದೆ.

7. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ತಿಳಿಸಿರುವಂತೆ ಎದುರುದಾರರು ಖಾಸಾ ಸಹೋದರರಾಗಿದ್ದು, 2ನೇ ಎದುರುದಾರರು ಒಂದೇ ಪಂಚಾಯಿತಿಯಲ್ಲಿ ಬಹಳ ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆಂದು ಹೇಳಿರುತ್ತಾರೆ. ದೂರುದಾರರು ತಮ್ಮ ಆಸ್ತಿಯ ಬಗ್ಗೆ 1947 ರಿಂದ ದಾಖಲೆಗಳನ್ನು ಹೊಂದಿದ್ದು, ಇಷ್ಟಾದರೂ ಸಹಾ ಎದುರುದಾರರು ಯಾವುದೇ ಒಂದು ಕಾರಣ ನೀಡಿ ಪೌತಿ ಖಾತೆ ಮಾಡದೆ ನಿರ್ಲಕ್ಷಮಾಡಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

8. 2ನೇ ಎದುರುದಾರರು ಗ್ರಾಮಸಹಾಯಕರಾಗಿದ್ದು, ಆದರೆ ಈತನು ಕಾಯಂ ಸರ್ಕಾರಿ ನೌಕರನಲ್ಲದ ಕಾರಣ ಈತನಿಗೆ ಕರ್ನಾಟಕ ಸೇವಾ ನಿಯಮಗಳು ಅನ್ವಯಿಸುವುದಿಲ್ಲವಾದ್ದರಿಂದ ಅವರನ್ನು ಪ್ರಕರಣದಂದ ಕೈಬಿಡಲಾಗಿದೆ.

ಈ ಹಿನ್ನೆಲೆಯಲ್ಲಿ ಶ್ರೀ. ಗಂಗಾಧರ ಶೆಟ್ಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮಪಂಚಾಯತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/212/ಗ್ರಾಪಂಕಾ/2017 ಬೆಂಗಳೂರು, ದಿನಾಂಕ-28-03-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಗಂಗಾಧರ ಶೆಟ್ಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮಪಂಚಾಯತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ತರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ 1 ರಿಂದ 75 ರವರೆಗೆ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ
5. ಶ್ರೀ. ಗಂಗಾಧರ ಶೆಟ್ಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮಪಂಚಾಯತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ
6. ಗಣಕಕೋಶ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.